ಮಂಗಳೂರು ವಿಶ್ವವಿದ್ಯಾನಿಲಯ
MANGALORE UNIVERSITY

ಕ್ರಮಾಂಕ/No. : ಎಂಯು/ಎಸಿಸಿ/ಯುಜಿ-ಕ್ಯಾಲ್/ಸಿಆರ್.15/2020-21/ಎ6

ಕುಲಸಚಿವರಕಛೇರಿ
ಮಂಗಳಗಂಗೋತ್ರಿ – 574 199
Office of the Registrar
Mangalagangothri – 574 199

ದಿನಾಂಕ/Date:24/08/2021

## ಸುತ್ತೋಲೆ

ವಿಷಯ: ಶೈಕ್ಷಣಿಕ ವರ್ಷ 2021-22ನೇ ಸಾಲಿನ ಪ್ರವೇಶ ಪ್ರಕ್ರಿಯೆಯನ್ನು ಪ್ರಾರಂಭಿಸುವ ಕುರಿತು.

ಉಲ್ಲೇಖ: 1. ಕಾಲೇಜು ಶಿಕ್ಷಣ ಆಯುಕ್ತರ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/45/ಪ್ರವೇಶಾತಿ ಮಾರ್ಗಸೂಚಿ/2021-22, ದಿನಾಂಕ: 30/07/2021 ಮತ್ತು 03/08/2021

2. ಕಾಲೇಜು ಶಿಕ್ಷಣ ಆಯುಕ್ತರ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/45/ ಪ್ರವೇಶಾತಿ ಮಾರ್ಗಸೂಚಿ/2021-22, ದಿನಾಂಕ: 21/08/2021.

~~~~~~~~

ಶೈಕ್ಷಣಿಕ ವರ್ಷ 2021-22ನೇ ಸಾಲಿನ ಪ್ರವೇಶಾತಿಗೆ ಸಂಬಂಧಿಸಿ ದಿನಾಂಕ 23/08/2021 ರಿಂದ ವಿಶ್ವವಿದ್ಯಾನಿಲಯವು ನೀಡುವ ಮಾರ್ಗಸೂಚಿಗಳ ಪ್ರಕಾರ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ವಯ (NEP) ಹಾಗೂ ಸಮಗ್ರ ವಿಶ್ವವಿದ್ಯಾನಿಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ (UUCMS)ಯಡಿಯಲ್ಲಿ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಉಲ್ಲೇಖ (2)ರಲ್ಲಿ ತಿಳಿಸಿರುವ ಸುತ್ತೋಲೆಯಲ್ಲಿ ಕಾಲೇಜು ಶಿಕ್ಷಣ ಆಯುಕ್ತರು ಸೂಚಿಸಿರುತ್ತಾರೆ (ಸದರಿ ಸುತ್ತೋಲೆಯು ಮಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಟ್ಟ ಎಲ್ಲಾ ಸಂಯೋಜಿತ/ಘಟಕ ಮತ್ತು ಸ್ವಾಯತ್ತ ಕಾಲೇಜುಗಳಿಗೆ ಅನ್ವಯಿಸುತ್ತದೆ). ಪ್ರತಿಯನ್ನು ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಈ ಪತ್ರದೊಂದಿಗೆ ಲಗತ್ತಿಸಲಾಗಿದೆ.

ಕುಲಸಚಿವರು

ರಿಗೆ:

1. ಕುಲಸಚಿವರು (ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
2. ಮಂಗಳೂರು ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ/ ಘಟಕ/ಸ್ವಾಯತ್ತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಎ4/ಎ5/ಎ7/ಎ8/ಎ9/ಎ10, ವಿಷಯ ನಿರ್ವಾಹಕರು, ಶೈಕ್ಷಣಿಕ ವಿಭಾಗ, ಕುಲಸಚಿವರ ಕಚೇರಿ, ಮಂಗಳೂರು ವಿಶ್ವವಿದ್ಯಾನಿಲಯ.
~~~~~~~~

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಪ್ರವಿ/45/ಪ್ರವೇಶಾತಿ ಮಾರ್ಗಸೂಚಿ/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:21.08.2021

## ಸುತ್ತೋಲೆ

ವಿಷಯ: 2021-22ನೇ ಸಾಲಿನಿಂದ ಇಲಾಖಾ ವ್ಯಾಪ್ತಿಯ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪ್ರವೇಶ ಪ್ರಕ್ರಿಯೆಯನ್ನು ಪ್ರಾರಂಭಿಸುವ ಕುರಿತು.

ಉಲ್ಲೇಖ : 1. ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:30.07.2021
2. ಈ ಕಛೇರಿಯ ಸಮಸಂಖ್ಯೆ ಸುತ್ತೋಲೆ ದಿನಾಂಕ:03.08.2021.

........

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2021-22ನೇ ಸಾಲಿನ ಸ್ನಾತಕ ಮತ್ತು ಸ್ನಾತಕೋತ್ತರ ಪ್ರವೇಶಾತಿ ಪ್ರಕ್ರಿಯೆಗೆ ಇಲಾಖೆಯು ನಿಗಧಿಪಡಿಸಿರುವ ಶುಲ್ಕದ ಪ್ರಕಾರ ಕ್ರಮ ಕೈಗೊಳ್ಳುವಂತೆ ಉಲ್ಲೇಖಿತ (1)ರಲ್ಲಿ ಸೂಚಿಸಲಾಗಿತ್ತು. ತದನಂತರ ಉಲ್ಲೇಖಿತ (2)ರಲ್ಲಿ ಪ್ರವೇಶಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದೂಡುವಂತೆ ತಿಳಿಸಲಾಗಿರುವುದು ಸರಿಯಷ್ಟೆ. ಇದೀಗ ದಿನಾಂಕ:23.08.2021 ರಿಂದ ಸಂಬಂದಪಟ್ಟ ವಿಶ್ವವಿದ್ಯಾಲಯ ನೀಡುವ ಮಾರ್ಗಸೂಚಿಗಳ ಪ್ರಕಾರ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯನ್ವಯ (NEP) ಹಾಗೂ ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ನಿರ್ವಹಣಾ ವ್ಯವಸ್ಥೆ (UUCMS) ಯಡಿಯಲ್ಲಿ ಪ್ರವೇಶ ಪ್ರಕ್ರಿಯೆಯನ್ನು ಪ್ರಾರಂಭಿಸಲು ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿಯನ್ನು:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ- ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3. ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಮತ್ತು ಜಂಟಿ ನಿರ್ದೇಶಕರ ಆಪ್ತ ಶಾಖೆ- ಮಾಹಿತಿಗಾಗಿ.